ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಮಾರುಕಟ್ಟೆ - (ಎಪಿಎಂಸಿ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ

ದಿನಾಂಕ : DATE 29-10-20

# ಎಪಿಎಂಸಿ ಕಾಯ್ದೆ ತಿದ್ದುಪಡಿ ಸ್ಪಷ್ಟೀಕರಣ ಆದೇಶ

ವಿ.ವಾ. 29-10-20

**ಬೆಂಗಳೂರು:** ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ಕ್ಕೆ ತಂದಿರುವ ತಿದ್ದುಪಡಿ ಬಗ್ಗೆ ಉಂಟಾದ ಕೆಲ ಗೊಂದಲಗಳ ಹಿನ್ನೆಲೆಯಲ್ಲಿ ಮತ್ತೊಂದು ಆದೇಶ ಹೊರಡಿಸಿರುವ ಕೃಷಿ ಮಾರಾಟ ಇಲಾಖೆ ನಿರ್ದೇಶಕ ಕರೀಗೌಡರು ಹಲವು ಸ್ಪಷ್ಟೀಕರಣ ನೀಡಿದ್ದಾರೆ.

ನಮೂನೆ 35-ಎ ರಲ್ಲಿ ಪರ್ಮಿಟ್ ಹಾಗೂ 35-ಬಿ ರಲ್ಲಿ ನಿಗಧಿಪಡಿಸಿರುವ ಪ್ರಮಾಣ ಪತ್ರಗಳ ಬಗ್ಗೆ ಆದೇಶದಲ್ಲಿ ವಿವರ ನೀಡಲಾಗಿದೆ. ಕೇಂದ್ರ ಸರ್ಕಾರದ ಕಾಯಿದೆಯಡಿ, ಕೃಷಿ ಉತ್ಪನ್ನ ಮಾರುಕಟ್ಟೆ(ಎಪಿಎಂಸಿ)ಯಲ್ಲಿ ಟ್ರೇಡ್ ಏರಿಯಾ ಪ್ರದೇಶದಲ್ಲಿ ಅಧಿಸೂಚಿ ಕೃಷಿ ಉತ್ಪನ್ನಗಳಲ್ಲಿ



ಸಾಂದರ್ಭಿಕ ಚಿತ್ರ

ವ್ಯವಹಾರ ಮಾಡುವ ವರ್ತಕರು, ಟ್ರೇಡ್ ಏರಿಯಾದಲ್ಲಿ ವ್ಯಾಪಾರ ಮಾಡುವ ಮತ್ತೊಬ್ಬ ವರ್ತಕರಿಗೆ ಕೃಷಿ ಉತ್ಪನ್ನಗಳನ್ನು ಸಾಗಾಣಿಕೆ ಮಾಡುವ ಸಂದರ್ಭದಲ್ಲಿ ನಮೂನೆ 35-ಎ ಅಗತ್ಯವಿಲ್ಲ.

ಕೇಂದ್ರ ಸರ್ಕಾರದ ಕಾಯಿದೆಯಡಿ ಟ್ರೇಡ್ ಏರಿಯಾ ಪ್ರದೇಶದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ವ್ಯವಹಾರ ಮಾಡುವ ವರ್ತಕರು, ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಮಾರುಕಟ್ಟೆ ಪ್ರಾಂಗಣದಲ್ಲಿ ವ್ಯಾಪಾರ ಮಾಡುವ ಲೈಸೆನ್ಸ್ ವರ್ತಕರಿಗೆ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಸಾಗಾಣಿಕೆ ಮಾಡುವ ಸಂದರ್ಭದಲ್ಲಿ ನಮೂನೆ 35-ಎ ಬಳಸುವುದು ಮಾರಾಟಗಾರರ ಇಚ್ಛೆಗೆ ಒಳಪಡುತ್ತದೆ. ಪ್ರಸ್ತುತ ಮಾರುಕಟ್ಟೆ ಪ್ರಾಂಗಣದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ವ್ಯವಹಾರ ಮಾಡುವ ವರ್ತಕರು, ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಸಾಗಾಣಿಕೆ ಮಾಡುವ ಸಂದರ್ಭದಲ್ಲಿ ನಮೂನೆ 35-ಎ ಜನರೇಟ್ ಮಾಡಿಕೊಳ್ಳಲು ಅವಕಾಶ ಮುಂದುವರಿಸಲಾಗಿದ್ದು, ಅದು ಕಡ್ಡಾಯವಿರುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.